**ಸಾಕ್ಷಿಯನ್ನು ದಿನಾಂಕ 07.04.2026 ರಂದು ಕರೆಯಿಸಿ ಪ್ರಮಾಣ ವಚನ ಮಾಡಿಸಲಾಯಿತು.**

**ಪಾಟೀ ಸವಾಲುಃ 1 ನೇ ಎದುರುದಾರರ ಪರ ವಕೀಲರಿಂದ**

ನಾನು ಹಳೆ ಬಸ್ ನಿಲ್ದಾಣದ ಬಳಿ ಖಾಸಗಿ ಕೆಲಸಕ್ಕೆ ಹೋಗುತ್ತಿದ್ದೆ. ನಾನು ತಿಂಗಳಿಗೆ ರೂ.16,000/- ಆದಾಯ ಗಳಿಸುತ್ತಿದ್ದ ಬಗ್ಗೆ ದಾಖಲೆಯನ್ನು ಹಾಜರುಪಡಿಸಿರುತ್ತೇನೆ. ಹಳೆ ಬಸ್ ನಿಲ್ದಾಣ ಹುಬ್ಬಳ್ಳಿಯಲ್ಲಿ ಬಹಳ ವಾಹನ ದಟ್ಟಣೆ ಇದ್ದು ಅಲ್ಲಿ ವಾಹನಗಳು ನಿಧಾನವಾಗಿ ಚಲಿಸುತ್ತವೆ ಅಂದರೆ ಸರಿಯಲ್ಲ. ಅಪಘಾತ ಕಾಲಕ್ಕೆ ರಸ್ತೆಯಲ್ಲಿ ಬರುತ್ತಿರುವ ವಾಹನಗಳನ್ನು ನೋಡದೇ ನಾನು ಒಮ್ಮೇಲೆ ರಸ್ತೆ ದಾಟಿದ್ದರಿಂದ ನನ್ನ ನಿರ್ಲಕ್ಷ್ಯತನದಿಂದಲೇ ಅಪಘಾತವಾಗಿರುತ್ತದೆ ಅಂದರೆ ಸರಿಯಲ್ಲ. ಅಪಘಾತದಲ್ಲಿ ನನಗೆ ಗಂಭೀರ ಗಾಯಗಳು ಉಂಟಾಗಿರುವುದಿಲ್ಲ ಅಂದರೆ ಸರಿಯಲ್ಲ. ಅಪಘಾತ ಕಾಲಕ್ಕೆ 1 ನೇ ಎದುರುದಾರರ ವಾಹನದ ವಿಮೆ ಚಾಲ್ತಿಯಲ್ಲಿದ್ದು ವಾಹನ ಚಾಲಕನಿಗೆ ಚಾಲನಾ ಪತ್ರ ಇದ್ದುದ್ದರಿಂದ 1 ನೇ ಎದುರುದಾರರು ನನಗೆ ಪರಿಹಾರ ನೀಡಲು ಬಾದ್ಯಸ್ಥರಲ್ಲ ಅಂದರೆ ಸರಿಯಲ್ಲ.

**ಪಾಟೀ ಸವಾಲುಃ 2 ನೇ ಎದುರುದಾರರ ಪರ ವಕೀಲರಿಂದ - ಸಮಯ ಕೋರಿದ್ದು ನೀಡಲಾಯಿತು.**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಅದೆ.

ಸಹಿ/-

2 ನೇ ಹೆ ಹಿ ದಿ ನ್ಯಾ ಮತ್ತು ಜೆಎಂಎಫಸಿ

ಧಾರವಾಡ.